# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2013-14ನೇ ಸಾಲಿಗೆ ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯನ್ನು (ಪಿ.ಇ.ಎ.ಐ.ಎಸ್) ಅನುಷ್ಠಾನಗೊಳಿಸಲು ವಿವಿಧ ಸಮಿತಿಗಳನ್ನು ರಚಿಸುವ ಕುರಿತು.

**ಓದಲಾಗಿದೆ :** (1) ದಿನಾಂಕ:04.06.2013ರಂದು ನವದೆಹಲಿಯಲ್ಲಿ ನಡೆದ ಪಿ.ಇ.ಎ.ಐ.ಎಸ್ ಸಂಬಂಧಿತ ಕಾರ್ಯಾಗಾರದ ನಡವಳಿಗಳು.

(2) 2013-14ನೇ ಸಾಲಿನಲ್ಲಿ ಪಿ.ಇ.ಎ.ಐ.ಎಸ್ ಯೋಜನೆಯನ್ನು ಅನುಷ್ಠಾನಗೊಳಿಸಲು ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ಹೊರಡಿಸಿರುವ ಮಾರ್ಗಸೂಚಿಗಳು.

**ಪ್ರಸ್ತಾವನೆ :**

ಉತ್ತಮ ಸಾಧನೆ ಮಾಡಿರುವ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳನ್ನು ಗುರುತಿಸಿ ಅವುಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಫಲಕಗಳನ್ನು ನೀಡಿ ಪುರಸ್ಕರಿಸುವುದು ಹಾಗು ಮತ್ತಷ್ಟು ಸಾಧನೆಗಳಿಗೆ ಪ್ರೇರಕವಾಗಿಸುವುದು ಮತ್ತು ರಾಜ್ಯದ ಇತರೆ ಪಂಚಾಯತ್ ರಾಜ್ ಸಂಸ್ಥೆಗಳನ್ನು ಜನಸ್ನೇಹಿ ಕಾರ್ಯಸಾಧನೆಗೆ ಉತ್ತೇಜಿಸುವ ಮಹತ್ತರ ಉದ್ದೇಶದೊಂದಿಗೆ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು " ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯನ್ನು (Panchayaths Empowerment and Accountability Incentivizing Scheme – PEAIS)" ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯ ಅಂಗವಾಗಿಸಿ ಅನುಷ್ಠಾನಗೊಳಿಸುತ್ತಿದೆ. ಪಂಚಾಯತ್ ರಾಜ್ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸುವಲ್ಲಿ ಈ ಯೋಜನೆಯು ಪ್ರೇರಕ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತಿದೆ. 2012-13ನೇ ಸಾಲಿನಲ್ಲಿ ರಾಜ್ಯದಲ್ಲಿ ಉತ್ತಮ ಸಾಧನೆಗೈದ ನಾಲ್ಕು ಗ್ರಾಮ ಪಂಚಾಯತಿಗಳು, ಎರಡು ತಾಲ್ಲೂಕು ಪಂಚಾಯತಿಗಳು ಮತ್ತು ಒಂದು ಜಿಲ್ಲಾ ಪಂಚಾಯತಿಯನ್ನು ಗುರುತಿಸಿ ಪಿ.ಇ.ಎ.ಐ.ಎಸ್ ಯೋಜನೆಯಡಿ ನಗದು ಬಹುಮಾನ ಮತ್ತು ಪ್ರಶಸ್ತಿ ಫಲಕಗಳನ್ನು ನೀಡಿ ರಾಷ್ಟ್ರೀಯ ಪಂಚಾಯತ್ ರಾಜ್ ದಿವಸದಂದು ನವದೆಹಲಿಯಲ್ಲಿ ಪುರಸ್ಕರಿಸಿರುವುದನ್ನು ಈ ಸಂದರ್ಭದಲ್ಲಿ ಸ್ಮರಿಸಬಹುದು. ಅಲ್ಲದೇ ಪಂಚಾಯತ್ ರಾಜ್ ವ್ಯವಸ್ಥೆಯ ಯಶಸ್ವಿ ಕಾರ್ಯಾಚರಣೆಗೆ ಕರ್ನಾಟಕ ರಾಜ್ಯಕ್ಕೂ ಸಹ ದೇಶೀಯ ಮಟ್ಟದಲ್ಲಿ ಪ್ರಥಮ ಸ್ಥಾನದಲ್ಲಿ ಗುರುತಿಸಿ ಗೌರವಿಸಿರುವುದನ್ನು ಸಹ ಗಣನೆಗೆ ತಂದುಕೊಳ್ಳಬಹುದು.

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು "ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯನ್ನು" 2013-14ನೇ ಸಾಲಿನಲ್ಲಿಯೂ ಸಹ ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಈ ನಿಟ್ಟಿನಲ್ಲಿ 2013-14ನೇ ಸಾಲಿನಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ದೀರ್ಘವಾಗಿ ಚರ್ಚಿಸಲು ದಿನಾಂಕ:04.06.2013ರಂದು ನವದೆಹಲಿಯಲ್ಲಿ ಕಾರ್ಯಾಗಾರವೊಂದನ್ನು ಆಯೋಜಿಸಿ ದೇಶದ ಎಲ್ಲಾ ರಾಜ್ಯಗಳ ಪಂಚಾಯತ್ ರಾಜ್ ಇಲಾಖೆಯ ಮುಖ್ಯಸ್ಥರುಗಳನ್ನು ಆಹ್ವಾನಿಸಲಾಗಿತ್ತು. ಸದರಿ ಕಾರ್ಯಾಗಾರದಲ್ಲಿ ಯೋಜನೆಯ ಅನುಷ್ಠಾನಕ್ಕೆ - ಸಂಬಂಧಿಸಿದಂತೆ ವ್ಯಾಪಕವಾಗಿ ಚರ್ಚಿಸಲಾಗಿದೆ. ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಚಿಂತಿಸಲಾಗಿದೆ. ಯೋಜನೆಯ ಅನುಷ್ಠಾನಕ್ಕೆ ಬೇಕಾದ ಅಗತ್ಯ ಮಾರ್ಗಸೂಚಿಗಳನ್ನು ಸಹ ಅಂತಿಮಗೊಳಿಸಲಾಗಿದೆ.

ಮಾರ್ಗಸೂಚಿಗಳಲ್ಲಿ ತಿಳಿಸಿದಂತೆ 2013-14ನೇ ಆರ್ಥಿಕ ಸಾಲಿನಲ್ಲಿ "ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯನ್ನು" ಅನುಷ್ಠಾನಗೊಳಿಸಲು ಸಹಕಾರಿಯಾಗಿ ವಿವಿಧ ಸಮಿತಿಗಳನ್ನು ರಚಿಸುವ ಅಗತ್ಯವಿದೆ. ಈ ಸಮಿತಿಗಳೆಂದರೆ ರಾಜ್ಯಮಟ್ಟದಲ್ಲಿ ಕಾರ್ಯನಿರ್ವಹಿಸುವ "ಪಂಚಾಯತಿಗಳ ಕಾರ್ಯನಿರ್ವಹಣೆ ಪರಾಮರ್ಶೆ ಸಮಿತಿ (Panchayaths Performance Assessment Committee – SPPAC) ಹಾಗು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುವ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳು. ಈ ಹಿನ್ನೆಲೆಯಲ್ಲಿ ಸಮಿತಿಗಳನ್ನು ರಚಿಸುವ ಸಂಬಂಧ ಸರ್ಕಾರದ ಆದೇಶವೊಂದನ್ನು ಹೊರಡಿಸುವ ಅಗತ್ಯವನ್ನು ಮನಗಾಣಲಾಗಿದ್ದು ಅದಕ್ಕಾಗಿ ಈ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 47 ತಾಪಸ 2013, ಬೆಂಗಳೂರು, ದಿನಾಂಕ:08.07.2013</u>

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, " ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯನ್ನು (Panchayaths Empowerment and Accountability Incentivizing Scheme – PEAIS)" 2012-13ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಸಹಕಾರಿಯಾಗಿ ಈ ಕೆಳಗಿನ ಸಮಿತಿಗಳನ್ನು ರಚಿಸಿ ಆದೇಶಿಸಲಾಗಿದೆ.

**"ಪಂಚಾಯತಿಗಳ ಕಾರ್ಯನಿರ್ವಹಣೆ ಪರಾಮರ್ಶೆ ಸಮಿತಿ (Panchayaths Performance Assessment Committee – SPPAC) :**

| ಕ್ರ.ಸಂ. | ಅಧಿಕಾರಿಗಳು | ಸಮಿತಿಯಲ್ಲಿನ ಅಧಿಕಾರ ಸ್ಥಾನ |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್),<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು | ಸದಸ್ಯರು |
| 3 | ಆಯುಕ್ತರು / ನಿರ್ದೇಶಕರು,<br>ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| 4 | ಆಯುಕ್ತರು / ನಿರ್ದೇಶಕರು,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು | ಸದಸ್ಯರು |
| 5 | ನಿರ್ದೇಶಕರು,<br>ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು | ಸದಸ್ಯರು |
| 6 | ನಿರ್ದೇಶಕರು,<br>ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗಳ ಅಧ್ಯಯನ ಸಂಸ್ಥೆ,<br>ನಾಗರಭಾವಿ, ಬೆಂಗಳೂರು | ಸದಸ್ಯರು |

| | | |
|---|---|---|
| 7 | ನಿರ್ದೇಶಕರು,<br>ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ಬೆಂಗಳೂರು | ಸದಸ್ಯರು |
| 8 | ನಿರ್ದೇಶಕರು (ಪಂಚಾಯತ್ ರಾಜ್),<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆಯಡಿ ಪ್ರಶ್ನೆ ಮಾಲಿಕೆಗಳನ್ನು ಸಿದ್ಧಪಡಿಸಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ರವಾನಿಸುವುದು, ಪ್ರಸ್ತಾವನೆಗಳನ್ನು ಪಡೆಯುವುದು, ಅಂಕಗಳನ್ನು ನೀಡುವುದು, ಪುರಸ್ಕಾರಕ್ಕಾಗಿ ಪಂಚಾಯತ್ ಸಂಸ್ಥೆಗಳ ಹೆಸರುಗಳನ್ನು ಅಂತಿಮಗೊಳಿಸಿ ಪಂಚಾಯತ್ ರಾಜ್ ಮಂತ್ರಾಲಯಕ್ಕೆ ಕಳುಹಿಸಿ ಕೊಡುವುದು ಸೇರಿದಂತೆ ಯೋಜನೆಯ ಎಲ್ಲಾ ಹಂತದ ಅನುಷ್ಠಾನ ಪ್ರಕ್ರಿಯೆಗಳ ಸಂಪೂರ್ಣ ಕೆಲಸ ಕಾರ್ಯಗಳನ್ನು ಈ ಸಮಿತಿಯು ಮಾಡತಕ್ಕದ್ದು.

ಪಿ.ಇ.ಎ.ಐ.ಎಸ್ ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳು :

| ಕ್ರ.ಸಂ. | ಜಿಲ್ಲಾ ಸಮಿತಿ | ತಾಲ್ಲೂಕು ಸಮಿತಿ | ಸಮಿತಿಯಲ್ಲಿನ ಅಧಿಕಾರ ಸ್ಥಾನ |
|---|---|---|---|
| 1 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,<br>ಜಿಲ್ಲಾ ಪಂಚಾಯತಿ | ಕಾರ್ಯನಿರ್ವಾಹಕ ಅಧಿಕಾರಿ,<br>ತಾಲ್ಲೂಕು ಪಂಚಾಯತಿ | ಅಧ್ಯಕ್ಷರು |
| 2 | ಉಪ ನಿರ್ದೇಶಕರು,<br>ಸಾರ್ವಜನಿಕ ಶಿಕ್ಷಣ ಇಲಾಖೆ | ಕ್ಷೇತ್ರ ಶಿಕ್ಷಣಾಧಿಕಾರಿಗಳು,<br>ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 3 | ಜಿಲ್ಲಾ ಆರೋಗ್ಯ ಮತ್ತು<br>ಕುಟುಂಬ ಕಲ್ಯಾಣ ಅಧಿಕಾರಿ | ತಾಲ್ಲೂಕು ಆರೋಗ್ಯ ಮತ್ತು ಕುಟುಂಬ<br>ಕಲ್ಯಾಣ ಅಧಿಕಾರಿ | ಸದಸ್ಯರು |
| 4 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ,<br>ಸಮಾಜ ಕಲ್ಯಾಣ ಇಲಾಖೆ | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ,<br>ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| 5 | * ಪಂಚಾಯತ್ ರಾಜ್ ವ್ಯವಸ್ಥೆಯ ಬಗ್ಗೆ ಜ್ಞಾನ ಹೊಂದಿರುವ ಸರ್ಕಾರೇತರ 2 ಸಂಸ್ಥೆಗಳ ತಲಾ ಒಬ್ಬ ಪ್ರತಿನಿಧಿ | ** ಪಂಚಾಯತ್ ರಾಜ್ ವ್ಯವಸ್ಥೆಯ ಬಗ್ಗೆ ಜ್ಞಾನ ಹೊಂದಿರುವ ಸರ್ಕಾರೇತರ 2 ಸಂಸ್ಥೆಗಳ ತಲಾ ಒಬ್ಬ ಪ್ರತಿನಿಧಿ | ನಾಮ ನಿರ್ದೇಶಿತ ಸದಸ್ಯ |
| 6 | ಉಪ ಕಾರ್ಯದರ್ಶಿ,<br>ಜಿಲ್ಲಾ ಪಂಚಾಯತಿ | ತಾಲ್ಲೂಕು ಯೋಜನಾಧಿಕಾರಿ,<br>ತಾಲ್ಲೂಕು ಪಂಚಾಯತಿ | ಸದಸ್ಯ ಕಾರ್ಯದರ್ಶಿ |

* ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನಾಮ ನಿರ್ದೇಶನವನ್ನು ಮಾಡತಕ್ಕದ್ದು. ** ಕಾರ್ಯನಿರ್ವಾಹಕ ಅಧಿಕಾರಿಗಳು ನಾಮನಿರ್ದೇಶನವನ್ನು ಮಾಡತಕ್ಕದ್ದು.

ಪಂಚಾಯತ್ ಸಂಸ್ಥೆಗಳಿಗೆ ಪ್ರಶ್ನೆ ಮಾಲಿಕೆಗಳನ್ನು ರವಾನಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡುವುದು, ಪೂರಕ ಮಾಹಿತಿಗಳ ಸಂಗ್ರಹಣೆ, ಪ್ರಸ್ತಾವನೆಗಳ ಕ್ರೋಢೀಕರಣ, ಪ್ರಸ್ತಾವನೆಗಳಿಗೆ ಶಿಫಾರಸ್ಸುಗಳನ್ನು ಮಾಡುವುದು,

ಪ್ರಸ್ತಾವನೆಗಳನ್ನು SPPAC ಸಮಿತಿಗೆ ಸಲ್ಲಿಸುವುದು ಸೇರಿದಂತೆ ಪಿ.ಇ.ಎ.ಐ.ಎಸ್ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಾಲ ಕಾಲಕ್ಕೆ ಹೊರಡಿಸಲಾಗುವ ಎಲ್ಲಾ ನಿರ್ದೇಶನಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಸಮಿತಿಗಳು ಪಾಲಿಸುವುದು.

SPPAC ಸಮಿತಿ ಅಂತಿಮಗೊಳಿಸಿದ 2013-14ನೇ ಸಾಲಿಗೆ ಪಂಚಾಯತಿಗಳ ಸಬಲೀಕರಣ ಮತ್ತು ಉತ್ತರದಾಯಿತ್ವ ಪ್ರೋತ್ಸಾಹ ಯೋಜನೆ ಪ್ರಶ್ನೆ ಮಾಲಿಕೆಗಳು, ಕಾಲಮಿತಿ ಚೌಕಟ್ಟು , ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ವಹಿಸಬೇಕಾದ ಕ್ರಮಗಳ ಕುರಿತು ಮಾಹಿತಿಯನ್ನು ನಂತರದ ದಿನಗಳಲ್ಲಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

8/7/13
(ಮಾರ್ಗರೇಟ್ ಆನಾ ನರೋನ್ಹ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ :

1. ಸರ್ಕಾರದ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಆನಂದ್ ರಾವ್ ವೃತ್ತ, ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ನಿರ್ದೇಶಕರು, ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗಳ ಅಧ್ಯಯನ ಸಂಸ್ಥೆ, ನಾಗರಭಾವಿ, ಬೆಂಗಳೂರು.
6. ನಿರ್ದೇಶಕರು, ಇಂಡಿಯನ್ ಇನ್ಸಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ಬನ್ನೇರುಘಟ್ಟ, ಬೆಂಗಳೂರು.
7. ಮುಖ್ಯಸ್ಥರು, ಗ್ರಾಮ ಸ್ವರಾಜ್ ಯೋಜನೆ, ಗ್ರಾ.ಅ.ಪಂ.ರಾಜ್ ಇಲಾಖೆ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ರಾಜ್ಯದ ಎಲ್ಲಾ ಜಿಲ್ಲೆಗಳು.
9. ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಜ್ಯದ ಎಲ್ಲಾ ಜಿಲ್ಲೆಗಳು.
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
11. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಜ್ಯದ ಎಲ್ಲಾ ಜಿಲ್ಲೆಗಳು.
12. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ರಾಜ್ಯದ ಎಲ್ಲಾ ಜಿಲ್ಲೆಗಳು.
13. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಜ್ಯದ ಎಲ್ಲಾ ತಾಲ್ಲೂಕುಗಳು.
14. ತಾಲ್ಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕುಗಳು.
15. ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ರಾಜ್ಯದ ಎಲ್ಲಾ ತಾಲ್ಲೂಕುಗಳು.
16. ಶಾಖಾ ರಕ್ಷಾ ಕಡತಕ್ಕೆ.
17. ಕಛೇರಿ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ.
5. ನಿರ್ದೇಶಕರು (ಪಂಚಾಯತ್ ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ನಿರ್ದೇಶಕರು, ಕ.ಗ್ರಾ.ನೀ.ಸ ಮತ್ತು ನೈ.ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ನಿರ್ದೇಶಕರು – 1 & 2, ಗ್ರಾಮೀಣ ಮೂಲಭೂತ ಸೌಕರ್ಯಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ನಿರ್ದೇಶಕರು, ಸ್ವಯಂ ಉದ್ಯೋಗ ಕಾರ್ಯಕ್ರಮಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಉಪ ಕಾರ್ಯದರ್ಶಿ (ಆಡಳಿತ) – 1 & 2, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.